All India Radio: Bangalore
Regional Bulletin In Kannada
02.11.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು :

- ಇಸ್ರೋದಿಂದ ಸಿಎಂಎಸ್-೩ ಉಪಗ್ರಹ ಉಡಾವಣೆ ಯಶಸ್ವಿ ; ನೌಕಾಪಡೆ, ಕಡಲ ಕ್ಷೇತ್ರದ ಸಾಮರ್ಥ್ಯ ಬಲವರ್ಧನೆ
- ಕ್ರೀಡಾಪಟುಗಳಿಗೆ ಸರ್ಕಾರದಿಂದ ನಿರಂತರ ಸಹಕಾರ - ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ
- ಸುರಂಗ ರಸ್ತೆ ಬಗ್ಗೆ ಟೀಕೆ ಬಿಟ್ಟು ಬಿಜೆಪಿ ನಾಯಕರು ಸಲಹೆ ನೀಡುವಂತೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ
- ಶೃಂಗೇರಿ ತಾಲೂಕಿನಲ್ಲಿ ಕಾಡಾನೆ ಸೆರೆ ಕಾರ್ಯಾಚರಣೆ ; ಕಾಡಂಚಿನ ೧೬ ಮನೆಗಳನ್ನು ಸ್ಥಳಾಂತರಿಸಲು ಸರ್ಕಾರ ನಿರ್ಧಾರ
- ಕರ್ನಾಟಕ, ಕೇರಳ ರಣಜಿ ಟ್ರೋಫಿ; ದ್ವಿಶತಕ ಬಾರಿಸಿದ ಕರುಣ್ ನಾಯರ್

<><><><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋ ನಡೆಸಿದ ಅತ್ಯಂತ ಭಾರವಾದ ಸಂವಹನ ಉಪಗ್ರಹ ಸಿಎಂಎಸ್-೦೩ ಉಡಾವಣೆ ಯಶಸ್ವಿಯಾಗಿದೆ. ೪ ಸಾವಿರದ ೪೧೦ ಕೆ.ಜಿ. ತೂಕದ ಈ ಉಪಗ್ರಹವನ್ನು ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಉಡಾವಣಾ ಕೇಂದ್ರದಿಂದ ಸಂಜೆ ೫ ಗಂಟೆ ೨೬ ನಿಮಿಷಕ್ಕೆ ಜಿಯೋ ಸಿಂಕ್ರೋನಸ್ ಟ್ರಾನ್ಸ್‌ಫರ್ ಆರ್ಬಿಟ್‌ಗೆ ಉಡಾವಣೆ ಮಾಡಲಾಗಿದೆ. ಇದು ಎಲ್‌ವಿಎಂ೩ ನ ೫ನೇ ಕಾರ್ಯಾಚರಣೆ ಹಾರಾಟವಾಗಿದೆ. ಈ ಕುರಿತಂತೆ ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿರುವ ನೆಹರು ತಾರಾಲಯದ ನಿರ್ದೇಶಕರಾದ ಡಾ. ಗುರು ಪ್ರಸಾದ್, ಇದು ಇತ್ತೀಚಿನ ದಿನಗಳಲ್ಲಿ ಭಾರತೀಯ ಆಂತರಿಕ್ಷ ಸಾಧಿಸಿರುವ ಮಹತ್ತರವಾದ ಸಾಧನೆಗಳಲ್ಲಿ ಇದು ಒಂದು ಎಂದು ಹೇಳಿದ್ದಾರೆ.

ಧ್ವನಿ : ಡಾ. ಗುರುಪ್ರಸಾದ್, ನೆಹರು ತಾರಾಲಯದ ನಿರ್ದೇಶಕ

ಇದು ನೌಕಾಪಡೆಯ ಬಾಹ್ಯಾಕಾಶ ಆಧಾರಿತ ಸಂವಹನ ಮತ್ತು ಕಡಲ ಕ್ಷೇತ್ರದ ಜಾಗೃತಿ ಸಾಮರ್ಥ್ಯವನ್ನು ಬಲಪಡಿಸಲಿದೆ. ಭಾರತೀಯ ನೌಕಾಪಡೆಯ ಇದುವರೆಗಿನ ಅತ್ಯಂತ ಸುಧಾರಿತ ಸಂವಹನ ಉಪಗ್ರಹವಾಗಿದೆ. ಸಿಎಂಎಸ್-೦೩ ಬಹುಬ್ಯಾಂಡ್ ಮಿಲಿಟರಿ ಸಂವಹನ ಉಪಗ್ರಹ ವ್ಯವಸ್ಥೆಯಾಗಿದ್ದು, ಇದು ಭಾರತೀಯ ಭೂಪ್ರದೇಶ ಸೇರಿದಂತೆ ಸಾಗರ ಪ್ರದೇಶಗಳಲ್ಲಿನ ಸೇವೆಗಳನ್ನು ಒದಗಿಸಲಿವೆ ಎಂದು ಇಸ್ರೋ ತಿಳಿಸಿದೆ. ಎಲ್‌ವಿಎಂ೩ ೬೪೦ಟನ್ ತೂಕ ಹೊಂದಿದೆ. ಇದು ಇಸ್ರೋದ ಅತ್ಯಂತ ಶಕ್ತಿಶಾಲಿ ರಾಕೆಟ್ ಆಗಿದೆ.

<><><><>

ಸರ್ಕಾರ ಕ್ರೀಡೆಗೆ ನಿರಂತರವಾಗಿ ಸಹಕಾರ ನೀಡುತ್ತಿದೆ. ಕ್ರೀಡಾಪಟುಗಳ ಉತ್ಸಾಹಕ್ಕೆ ತಕ್ಕಂತೆ ಸರ್ಕಾರವೂ ಪ್ರೋತ್ಸಾಹ ನೀಡಲು ಸದಾ ಸಿದ್ಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ಕ್ರೀಡಾ ಮತ್ತು ಯುವಜನ ಸೇವಾ ಇಲಾಖೆ ಮತ್ತು ರಾಜ್ಯ ಒಲಿಂಪಿಕ್ ಅಸೋಸಿಯೇಷನ್ ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ೧೪ ವರ್ಷದೊಳಗಿನ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಕ್ರೀಡೆಗಳಲ್ಲಿ ಭಾಗವಹಿಸಲು ಇಂಥಾ ಕ್ರೀಡಾಕೂಟ ಸಹಕಾರಿ ಆಗಲಿದ್ದು, ಪ್ರತಿಯೊಬ್ಬರೂ ಉತ್ಸಾಹದಿಂದ ಭಾಗವಹಿಸುವಂತೆ ತಿಳಿಸಿದರು. ಕ್ರೀಡೆಯಲ್ಲಿ ಗೆಲುವು ಸೋಲಿಗಿಂತ ಭಾಗವಹಿಸುವಿಕೆ ಅತೀ ಮುಖ್ಯ ಎಂದು ಹೇಳಿದರು. ಅಂತಾರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಪದಕ ವಿಜೇತ ಪಟುಗಳಿಗೆ ಪೊಲೀಸ್ ಇಲಾಖೆಯಲ್ಲಿ ನೇರ ನೇಮಕಾತಿ ಮಾಡಿಕೊಳ್ಳಲು ಸರ್ಕಾರ ನಿರ್ಧರಿಸಿದೆ. ಪೊಲೀಸ್ ಇಲಾಖೆಯಲ್ಲಿ ಶೇಕಡಾ ೩ ರಷ್ಟು ಹುದ್ದೆಗಳು ಮತ್ತು ಇತರೆ ಇಲಾಖೆಗಳಲ್ಲಿ ಶೇಕಡಾ ೨ ರಷ್ಟು ಹುದ್ದೆಗಳನ್ನು ನೀಡಲಾಗುವುದು ಎಂದು ಭರವಸೆ ನೀಡಿದರು.

<><><><>

ಸುರಂಗ ರಸ್ತೆಗಾಗಿ ಲಾಲ್‌ಬಾಗ್ ಹಾಳು ಮಾಡಲು ಹೊರಟ್ಟಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ನಾಯಕರು ಟೀಕೆಗಳನ್ನು ಬಿಟ್ಟು ಸಲಹೆ ನೀಡಲಿ ಎಂದು ಹೇಳಿದ್ದಾರೆ. ಯಾವುದೇ ಅಭಿವೃದ್ಧಿ ಕೆಲಸ ಕೈಗೆತ್ತಿಕೊಂಡರೂ ಬಿಜೆಪಿ ನಾಯಕರು ವಿರೋಧ ವ್ಯಕ್ತಪಡಿಸಿದ್ದು, ಈ ಹಿಂದೆ ಸ್ಟೀಲ್‌ಬ್ರಿಡ್ಜ್‌ಗೂ ಆಕ್ಷೇಪ ವ್ಯಕ್ತಪಡಿಸಿದ್ದರು ಎಂದು ಅಸಮಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ

ಮೆಟ್ರೋ ಸಂಚಾರವೂ ಸುರಂಗ ರಸ್ತೆ ಮೂಲಕ ಹಾದುಹೋಗುತ್ತಿಲ್ಲವೇ ಎಂದು ಪ್ರಶ್ನಿಸಿದ್ದಾರೆ. ಇದೇ ವೇಳೆ ಆರ್.ಎಸ್.ಎಸ್. ಇಲ್ಲದೇ ಹೋದರೆ ಬಿಜೆಪಿ ಶೂನ್ಯ ಎಂದು ಪ್ರತಿಕ್ರಿಯಿಸಿದ್ದಾರೆ.

<><><>

ರಾಜ್ಯದಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪಥ ಸಂಚಲನಕ್ಕೆ ಯಾಕೆ ಅನುಮತಿ ನೀಡಬೇಕು ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರ್‌ಎಸ್‌ಎಸ್ ಪರ ಮಾತನಾಡದಿದ್ದರೆ ಬಿಜೆಪಿ ನಾಯಕರಿಗೆ ಟಿಕೆಟ್ ಸಿಗಲ್ಲ ಎಂದು ವ್ಯಂಗ್ಯವಾಡಿದ್ದಾರೆ. ಖಾಸಗಿ ಜಾಗ ಇಲ್ಲವೇ, ನಿಮ್ಮ ನಾಯಕರ ಒಡೆತನ ಜಾಗಗಳಲ್ಲಿ ಪಥ ಸಂಚಲನ ನಡೆಸುವಂತೆ ತಿಳಿಸಿದ್ದಾರೆ. ಇದೇ ವೇಳೆ ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಕುರಿತಂತೆ ಪ್ರತಿಕ್ರಿಯಿಸಿ ಹೈಕಮಾಂಡ್ ತೀರ್ಮಾನವೇ ಅಂತಿಮ ಎಂದು ಹೇಳಿದ್ದಾರೆ.

<><><>

ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ತಾಲೂಕಿನ ಕೆರೆಕಟ್ಟೆ ಗ್ರಾಮದಲ್ಲಿ ಕಳೆದ ೨ ದಿನಗಳ ಹಿಂದೆ ಕಾಡಾನೆಯಿಂದ ಇಬ್ಬರು ರೈತರು ಸಾವನ್ನಪ್ಪಿದ್ದಾರೆ. ಈ ಕಾಡಾನೆಯ ಸೆರೆಗೆ ಸರ್ಕಾರ ಆದೇಶ ನೀಡಿದೆ. ಅದರಂತೆ ಸುಮಾರು ೬ ಸಾಕಾನೆಗಳು ಸ್ಥಳಕ್ಕೆ ಆಗಮಿಸಿದ್ದು ಕುಮ್ಕಿ ಆನೆಗಳು ಹಾಗೂ ಅರಣ್ಯ ಇಲಾಖೆ ಸಿಬ್ಬಂದಿ ಕಾರ್ಯಚರಣೆ ಆರಂಭಿಸಿದ್ದಾರೆ. ಆನೆ ದಾಳಿಯಿಂದ ಮೃತಪಟ್ಟ ಕುಟುಂಬಗನ್ನು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ ಜಾರ್ಜ್ ಭೇಟಿ ನೀಡಿ ಸಾಂತ್ವಾನ ಹೇಳಿದ್ದಾರೆ. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕಾರ್ಯಾಚಾರಣೆ ನಡೆಸಿ ಆನೆ ಸೆರೆ ಹಿಡಿದು ಕೂಡಲೆ ಇಲ್ಲಿಂದ ಸ್ಥಳಾಂತರಿಸಲಾಗುವುದು ಎಂದು ಹೇಳಿದ್ದಾರೆ. ಕಾಂಡಚಿನಲ್ಲಿರುವ ಸುಮಾರು ೧೬ ಮನೆಗಳನ್ನು ಬೇರೆಡೆಗೆ ಸ್ಥಳಾಂತರ ಮಾಡಿ ಪರ್ಯಾಯ ಜಾಗ ನೀಡಲು ತೀರ್ಮಾನಿಸಲಾಗಿದೆ. ಕಾಡಾನೆಗಳಿಂದ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ಕೇಂದ್ರ ಅರಣ್ಯ ಸಚಿವರ ಗಮನಕ್ಕೆ ತಂದು ಪರಿಹಾರ ಕಂಡುಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಮಂಗಳಾಪುರಂನಲ್ಲಿ ನಡೆಯುತ್ತಿರುವ ಕರ್ನಾಟಕ, ಕೇರಳ, ರಣಜಿ ಟ್ರೋಫಿ ಪಂದ್ಯಾವಳಿಯಲ್ಲಿ ಕೇರಳ ವಿರುದ್ಧ ಕರ್ನಾಟಕ ೫೮೬ ರನ್ ಗಳಿಸಿದೆ. ಈ ಗುರಿ ಬೆನ್ನತ್ತಿರುವ ಕೇರಳ ದಿನದಾಟದ ಅಂತ್ಯಕ್ಕೆ ೩ ವಿಕೆಟ್ ನಷ್ಟಕ್ಕೆ ೨೧ ರನ್ ಗಳಿಸಿದೆ. ಈ ಪಂದ್ಯದಲ್ಲಿ ಕನ್ನಡಿಗ ಕರುಣ್ ನಾಯರ್

ದ್ವಿಶತಕ ಬಾರಿಸಿದ್ದಾರೆ. ಗೋವಾ ವಿರುದ್ಧ ನಡೆದ ಪಂದ್ಯದಲ್ಲಿ ದ್ವಿಶತಕ ಬಾರಿಸುವಲ್ಲಿ ವಿಫಲರಾಗಿದ್ದ ಕರುಣ್ ಕೇರಳ ವಿರುದ್ಧ ಅಮೋಘ ದ್ವಿಶತಕ ಗಳಿಸಿ ತಂಡ ಬೃಹತ್ ಮೊತ್ತ ಕಲೆಹಾಕುವಲ್ಲಿ ಯಶಸ್ವಿಯಾಗಿದ್ದಾರೆ. ಈ ಮೂಲಕ ಮತ್ತೆ ಭಾರತ ತಂಡದಲ್ಲಿ ಅವಕಾಶ ಗಿಟ್ಟಿಸಿಕೊಳ್ಳಲು ಕರುಣ್ ನಾಯರ್ ಪ್ರಯತ್ನಿಸುತ್ತಿದ್ದಾರೆ.

<><><><>

ಮಂಗಳೂರಿನಲ್ಲಿ ನಡೆದ ಮಂಗಳೂರು ಇಂಡಿಯಾ ಇಂಟರ್ ನ್ಯಾಷನಲ್ ಚಾಲೆಂಜ್ ೨೦೨೫ ಬ್ಯಾಡ್ಮಿಂಟನ್ ಪಂದ್ಯಾವಳಿಗೆ ತೆರೆ ಬಿದ್ದಿದೆ. ಮಹಿಳೆಯರ ಸಿಂಗಲ್ಸ್‌ನಲ್ಲಿ ಭಾರತದ ೩ನೇ ಶ್ರೇಯಾಂಕದ ಮಾನ್ಸಿ ಸಿಂಗ್ ಗೆಲುವು ಸಾಧಿಸಿದ್ದಾರೆ. ಪುರುಷರ ಸಿಂಗಲ್ಸ್ ಪಂದ್ಯದಲ್ಲಿ ಭಾರತದ ಅಗ್ರ ಶ್ರೇಯಾಂಕಿತ ಆಟಗಾರ ರಿತ್ವಿಕ್ ಸಂಜೀವಿ ಸತೀಶ್ ಕುಮಾರ್ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ. ಮಹಿಳೆಯರ ಡಬಲ್ಸ್ ಫೈನಲ್ ಪಂದ್ಯದಲ್ಲಿ ೫ನೇ ಶ್ರೇಯಾಂಕದ ಥಾಯ್ಲೆಂಡ್ ಆಟಗಾರರಾದ ಹತಾಯ್‌ತಿಪ್ ಮಿಜದ್ ಮತ್ತು ನಪಪಕೊರ್ನ್ ತುಂಗ್ಕಸತಾನ್ ಜೋಡಿಯು ಭಾರತದ ಶ್ರೀನಿಧಿ ನಾರಾಯಣನ್ ಮತ್ತು ರೆಶಿಕಾ ಜೋಡಿಯನ್ನು ೨೧-೭, ೨೧-೧೧ ಸೆಟ್‌ಗಳಿಂದ ಪರಾಭವಗೊಳಿಸಿದೆ. ಮಿಕ್ಸೆಡ್ ಡಬಲ್ಸ್‌ನಲ್ಲಿ ಭಾರತದ ಎರಡನೇ ಶ್ರೇಯಾಂಕದ ಧ್ರುವ ರಾವತ್ ಮತ್ತು ಮನೀಷಾ ಕೆ ಜೋಡಿಯು ೧೮-೨೧, ೨೧-೧೮ ಮತ್ತು ೨೨-೨೦ ಸೆಟ್‌ಗಳಿಂದ ಥಾಯ್ಲೆಂಡಿನ ತನಾವಿನ್ ಮ್ಯಾದೀ ಮತ್ತು ನಪಪಕೊರ್ನ್ ತುಂಗ್ಕಸತಾನ್ ಜೋಡಿಯನ್ನು ಮಣಿಸಿದೆ.

<><><><>

ಕನ್ನಡ ಸಿನೆಮಾ, ಕಿರುತೆರೆ ಧಾರವಾಹಿ, ಪ್ರಾದೇಶಿಕ ವಿಭಿನ್ನ ಜಾನಪದ, ಕಲೆ, ಸಂಸ್ಕೃತಿಯನ್ನು ಜಾಗತಿಕ ಮಟ್ಟದಲ್ಲಿ ಅನಾವರಣ ಮಾಡುವ ಉದ್ದೇಶದೊಂದಿಗೆ ಜನವರಿ ವೇಳೆಗೆ ಕನ್ನಡದ ಓಟಿಟಿ ಪ್ಲಾಟ್‌ಫಾರ್ಮ್ ಕಾರ್ಯಾರಂಭ ಮಾಡಲಿದೆ ಎಂದು ಕಂಠೀರವ ಸ್ಟುಡಿಯೋ ಅಧ್ಯಕ್ಷ ಮೆಹಬೂಬ್ ಪಾಷ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪ್ರಾದೇಶಿಕತೆಗೆ ತಕ್ಕಂತೆ ಗ್ರಾಮೀಣ ಸೊಗಡಿನ ಕಲೆ, ಪ್ರತಿಭೆಗಳು ಇವೆ. ಇಂತಹ ಕಲೆ, ಪ್ರತಿಭೆಗಳನ್ನು ದೇಶ, ವಿಶ್ವವ್ಯಾಪಿ ಪರಿಚಯಿಸಲು ಆನ್‌ಲೈನ್ ಓಟಿಟಿ ವೇದಿಕೆ ಸಹಕಾರಿಯಾಗಲಿದೆ. ಈ ಯೋಜನೆ ಕುರಿತು ಪ್ರಸಕ್ತ ವರ್ಷದ ಬಜೆಟ್ ನಲ್ಲಿ ಘೋಷಣೆಯಾಗಿ

ಸಿದ್ಧತೆಗೆ ಹಲವು ಉನ್ನತ ಮಟ್ಟದ ಸಭೆಗೂ ನಡೆದಿದ್ದು, ಈಗಾಗಲೇ ಅಗತ್ಯ ತಾಂತ್ರಿಕ ಸಿದ್ಧತಾ ಕ್ರಮಗಳೂ ಸಹ ನಡೆಯುತ್ತಿವೆ ಎಂದು ಹೇಳಿದ್ದಾರೆ.

<><><><>

ಕನ್ನಡವು ಬದುಕಿನ ಭಾಗವಾಗಬೇಕು ಎಂದು ಖ್ಯಾತ ಕವಿ ಡಾ. ಸತ್ಯಾನಂದ ಪಾತ್ರೋಟ ತಿಳಿಸಿದ್ದಾರೆ. ಬಾಗಲಕೋಟೆಯಲ್ಲಿ ರಾಜ್ಯೋತ್ಸವ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರಸ್ತುತ ದಿನಮಾನಗಳಲ್ಲಿ ಆಂಗ್ಲ ಭಾಷೆ ವ್ಯಾಮೋಹ ಎಲ್ಲ ಭಾಗದಲ್ಲೂ ಪಸರಿಸುತ್ತಿದೆ. ಆದರೆ ಮಾತೃ ಭಾಷೆ ನೀಡಿದಷ್ಟು ಆತ್ಮ ವಿಶ್ವಾಸ ಅನ್ಯ ಭಾಷೆ ನೀಡಲಾರವು, ಕನ್ನಡವಿದ್ದಾಗ ಮಾತ್ರ ನಾವು ಉಳಿಯಲು, ಬೆಳೆಯಲು ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><>

ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳಿಂದ ಸರ್ಕಾರ ದಿವಾಳಿ ಆಗಿದೆ ಎಂಬ ಪ್ರತಿಪಕ್ಷಗಳ ಆರೋಪ ಸುಳ್ಳು ಎಂದು ವಕ್ಫ್ ಸಚಿವ ಜಮೀರ್ ಅಹಮದ್ ಖಾನ್ ತಿಳಿಸಿದ್ದಾರೆ. ಹೊಸಪೇಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ ೬ ರಂದು ಕೂಡ್ಲಿಗಿಯಲ್ಲಿ ೧ ಸಾವಿರದ ೨೪೦ ಕೋಟಿರೂ ವೆಚ್ಚದ ಅಭಿವೃದ್ಧಿ ಯೋಜನೆಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭೂಮಿಪೂಜೆ ನೆರವೇರಿಸಲಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>